# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103


ಸಂಖ್ಯೆ: ತುವಿ: ಡಿಇವಿ-02:2024-25 | 1998

ದಿನಾಂಕ:26.08.2024

## ಸುತ್ತೋಲೆ

**ವಿಷಯ:** ಭಾರತ ಸರ್ಕಾರದ ಲಾಂಛನಗಳ ಮತ್ತು ಹೆಸರುಗಳ (ಅನುಚಿತ ಬಳಕೆ ತಡೆ) ಕಾಯ್ದೆ1950 ನ್ನು ಪಾಲನೆ ಮಾಡುವ ಕುರಿತು.

**ಉಲ್ಲೇಖ:** 1.ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇವರ ಪತ್ರ ದಿನಾಂಕ:12.08.2024

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 28.8.2024

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರದ ಹಲವು ಲಾಂಛನಗಳ ಹಾಗೂ ಹೆಸರುಗಳನ್ನು ಪ್ರಮುಖವೆಂದು ಪರಿಗಣಿಸಿ ಅವುಗಳ ಅನುಚಿತ ಬಳಕೆಯನ್ನು ತಡೆಯಲು Emblems and Names (Prevention of Improper Use) Act, 1950 ಅನ್ನು ಜಾರಿಗೆ ತಂದಿರುತ್ತದೆ. ಈ ಕಾಯ್ದೆಯ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ ಲಾಂಛನ ಮತ್ತು ಹೆಸರುಗಳನ್ನು ಯಾವುದೇ ವ್ಯಾಪಾರ, ವ್ಯವಹಾರ, ಹಕ್ಕು ಸ್ವಾಮ್ಯದಲ್ಲಿ ಚಿಹ್ನೆ ಅಥವಾ ವಿನ್ಯಾಸದಲ್ಲಿ ಬಳಸತಕ್ಕದ್ದಲ್ಲ. ಕಾಯ್ದೆಯ ಅನುಸೂಚಿಯಲ್ಲಿ ನಿರ್ಧಿಷ್ಟಪಡಿಸಿದ ಲಾಂಛನ ಮತ್ತು ಹೆಸರುಗಳನ್ನು ಕೇಂದ್ರ ಸರ್ಕಾರದ ಪೂರ್ವಾನುಮತಿ ಇಲ್ಲದೆ ಬಳಸುವಂತಿಲ್ಲ ಹಾಗೂ ಯಾವುದೇ ಸಕ್ಷಮ ಪ್ರಾಧಿಕಾರವು ಅಂತಹ ಹೆಸರುಗಳನ್ನು ನೋಂದಣಿ ಮಾಡಲು ಅನುಮತಿ ಇರುವುದಿಲ್ಲ.

ಆದರೂ ಈ ಕಾಯ್ದೆಯ ಉಪಬಂಧಗಳ ವಿರುದ್ಧವಾಗಿ ಅನೇಕ ಲಾಂಛನಗಳ ಮತ್ತು ಹೆಸರುಗಳ ಉಪಯೋಗವಾಗುತ್ತಿರುವುದು ಕಂಡುಬಂದಿದ್ದು, ಈ ಉಪಬಂಧಗಳನ್ನು ಉಲ್ಲಂಘನೆ ಮಾಡುವ ಸರ್ಕಾರೇತರ ಸಂಘ-ಸಂಸ್ಥೆಗಳು ಇತ್ಯಾದಿಗಳು ಕಾನೂನು ಕ್ರಮಕ್ಕೆ ಬಾಧ್ಯರಾಗಿರುತ್ತಾರೆ. ಆದ್ದರಿಂದ ತಮ್ಮ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸಂಘ /ಸಂಸ್ಥೆ/ನಿಗಮ ಮಂಡಳಿ/ಆಯೋಗ/ನಿಕಾಯಗಳಲ್ಲಿ ಮತ್ತು ಸರ್ಕಾರೇತರ ಸಂಸ್ಥೆಗಳಲ್ಲಿಯೂ ಸಹ ಕಾಯ್ದೆಯ ಅನಸೂಚಿಯಲ್ಲಿನ ಲಾಂಛನಗಳ ಮತ್ತು ಹೆಸರುಗಳ ಅನುಚಿತ ಬಳಕೆಯಾಗದಂತೆ ಕ್ರಮವಹಿಸುವಂತೆ ತಿಳಿಸಲಾಗಿದೆ. ಈ ಕಾಯ್ದೆಯಲ್ಲಿನ ಉಪಬಂಧಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಯಾವುದೇ ಉಲ್ಲಂಘನೆ ಕಂಡು ಬಂದಲ್ಲಿ ತಕ್ಷಣ ಕಾಯ್ದೆಯನ್ವಯ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

ಈ ಸಂಬಂಧ ಮೇಲ್ಕಂಡ ಉಲ್ಲೇಖಿತ ಪತ್ರವನ್ನು ಲಗತ್ತಿಸಿದ್ದು, ಸರ್ಕಾರದ ಮೇಲ್ಕಂಡ ಸುತ್ತೋಲೆಯನ್ವಯ ಭಾರತ ಸರ್ಕಾರದ ಲಾಂಛನಗಳ ಮತ್ತು ಹೆಸರುಗಳ (ಅನುಚಿತ ಬಳಕೆ ತಡೆ) ಕಾಯ್ದೆ1950 ನ್ನು ಕಡ್ಡಾಯವಾಗಿ ಪಾಲನೆ ಮಾಡುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

ಉಪಕುಲಸಚಿವರು

ಉಪಕುಲಸಚಿವರು

ಅಭಿವೃದ್ಧಿ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ:

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಹಾಗೂ ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಸಂಬಂಧ ಪಟ್ಟ ಕಾಲೇಜುಗಳಿಗೆ ಇ-ಮೇಲ್ ಕಳುಹಿಸುವುದು.
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.

**ಕರ್ನಾಟಕ ಸರ್ಕಾರ**

**ಸಂಖ್ಯೆ:** ಸಿಆಸುಇ 90 ರಾಸ 2024

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:12.08.2024.

**ಸುತ್ತೋಲೆ**

**ವಿಷಯ:-** ಭಾರತ ಸರ್ಕಾರದ ಲಾಂಛನಗಳ ಮತ್ತು ಹೆಸರುಗಳ (ಅನುಚಿತ ಬಳಕೆ ತಡೆ) ಕಾಯ್ದೆ, 1950 ನ್ನು ಪಾಲನೆ ಮಾಡುವ ಕುರಿತು.

*****

ಭಾರತ ಸರ್ಕಾರವು ಹಲವು ಲಾಂಛನ ಹಾಗೂ ಹೆಸರುಗಳನ್ನು ಪ್ರಮುಖವೆಂದು ಪರಿಗಣಿಸಿ, ಅವುಗಳ ಅನುಚಿತ ಬಳಕೆಯನ್ನು ತಡೆಯಲು Emblems and Names (Prevention of Improper Use) Act, 1950 ಅನ್ನು ಜಾರಿಗೆ ತಂದಿರುತ್ತದೆ. ಈ ಕಾಯ್ದೆಯ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಲಾದ ಲಾಂಛನ ಮತ್ತು ಹೆಸರುಗಳನ್ನು ಯಾವುದೇ ವ್ಯಾಪಾರ, ವ್ಯವಹಾರ, ಹಕ್ಕು ಸ್ವಾಮ್ಯದಲ್ಲಿ, ಚಿಹ್ನೆ ಅಥವಾ ವಿನ್ಯಾಸದಲ್ಲಿ ಬಳಸತಕ್ಕದ್ದಲ್ಲ. ಕಾಯ್ದೆಯ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಲಾಂಛನ ಮತ್ತು ಹೆಸರುಗಳನ್ನು ಕೇಂದ್ರ ಸರ್ಕಾರದ ಪೂರ್ವಾನುಮತಿ ಇಲ್ಲದೆ ಬಳಸುವಂತಿಲ್ಲ. ಹಾಗೂ ಯಾವುದೇ ಸಕ್ಷಮ ಪ್ರಾಧಿಕಾರವು ಅಂತಹ ಹೆಸರುಗಳನ್ನು ನೋಂದಣಿ ಮಾಡಲು ಅನುಮತಿ ಇರುವುದಿಲ್ಲ.

ಆದರೂ ಈ ಕಾಯ್ದೆಯ ಉಪಬಂಧಗಳ ವಿರುದ್ಧವಾಗಿ ಅನೇಕ ಲಾಂಛನಗಳ ಮತ್ತು ಹೆಸರುಗಳ ಉಪಯೋಗವಾಗುತ್ತಿರುವುದು ಕಂಡುಬಂದಿದ್ದು, ಈ ಉಪಬಂಧಗಳನ್ನು ಉಲ್ಲಂಘನೆ ಮಾಡುವ ಸರ್ಕಾರೇತರ ಸಂಘ/ಸಂಸ್ಥೆಗಳು ಇತ್ಯಾದಿಗಳು ಕಾನೂನು ಕ್ರಮಕ್ಕೆ ಬಾಧ್ಯರಾಗಿರುತ್ತಾರೆ. ಆದ್ದರಿಂದ, ತಮ್ಮ ಇಲಾಖೆಯ ವ್ಯಾಪ್ತಿಗೆ ಒಳಪಡುವ ಎಲ್ಲಾ ಸಂಘ/ ಸಂಸ್ಥೆ/ ನಿಗಮ/ ಮಂಡಳಿ/ ಆಯೋಗ/ ನಿಕಾಯಗಳಲ್ಲಿ ಮತ್ತು ಸರ್ಕಾರೇತರ ಸಂಸ್ಥೆಗಳಲ್ಲಿಯೂ ಸಹ ಕಾಯ್ದೆಯ ಅನುಸೂಚಿಯಲ್ಲಿನ ಲಾಂಛನಗಳ ಮತ್ತು ಹೆಸರುಗಳ ಅನುಚಿತ ಬಳಕೆಯಾಗದಂತೆ ಕ್ರಮವಹಿಸುವಂತೆ ತಿಳಿಸಲಾಗಿದೆ. ಈ ಕಾಯ್ದೆಯಲ್ಲಿನ ಉಪಬಂಧಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ, ಯಾವುದೇ ಉಲ್ಲಂಘನೆ ಕಂಡು ಬಂದಲ್ಲಿ ತಕ್ಷಣ ಕಾಯ್ದೆಯನ್ವಯ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ.

ಸಂದೀಪ್ ಬಿ.ಕೆ. 12/8/24
(ಸಂದೀಪ್ ಬಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜಕೀಯ)

Registrar 13/8/24

12.08

**ಇವರಿಗೆ:**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
2. ಕಾರ್ಯದರ್ಶಿಗಳು, ಕರ್ನಾಟಕ ವಿಧಾನ ಪರಿಷತ್ತು ಮತ್ತು ವಿಧಾನಸಭೆ, ವಿಧಾನ ಸೌಧ, ಬೆಂಗಳೂರು.
3. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು.
4. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ಪೊಲೀಸ್ ಪ್ರಧಾನ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.
5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
6. ಎಲ್ಲಾ ಪ್ರಾದೇಶಿಕ ಆಯುಕ್ತರು/ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
7. ಎಲ್ಲಾ ಪೊಲೀಸ್ ಆಯುಕ್ತರುಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
8. ಎಲ್ಲಾ ವಿಶ್ವವಿದ್ಯಾನಿಲಯಗಳ ಕುಲಪತಿಗಳು.

9. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
10. ಎಲ್ಲಾ ನಿಗಮ/ ಮಂಡಳಿ/ ಪ್ರಾಧಿಕಾರಗಳ ಅಧ್ಯಕ್ಷರು.
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪತ್ರ.

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿಗಳು.
2. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಉಪ ಮುಖ್ಯಮಂತ್ರಿಯವರ ಹಾಗೂ ಎಲ್ಲಾ ಸಚಿವರುಗಳ ಆಪ್ತ ಕಾರ್ಯದರ್ಶಿಗಳು.